## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಬೂವನಹಳ್ಳಿ ನಾಗರಾಜ್, ಉಪ ಕಾರ್ಯದರ್ಶಿ, ವೃಂದ–ಎ (ಹಿರಿಯ ಶ್ರೇಣಿ) ಇವರ ಸೇವೆಯನ್ನು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಇಲ್ಲಿಂದ ಹಿಂಪಡೆದು ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯಲ್ಲಿ ಮುಂದುವರೆಸುವ ಬಗ್ಗೆ – ಆದೇಶ

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 188 ಪಬವ 2006 ದಿನಾಂಕ: 10–07–2006.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 467 ಪಬವ 2013 ದಿನಾಂಕ: 22.08.2014
3. ಅಧಿಸೂಚನೆ ಸಂಖ್ಯೆ: ಗ್ರಾಅಪ 13 ಪಬವ 2012 ದಿನಾಂಕ: 29–02–2012.

------

**ಪ್ರಸ್ತಾವನೆ:**

ಮೂಲತಃ ರೇಷ್ಮೆ ಇಲಾಖೆಯ ಸೇವೆಗೆ ಸೇರಿದ ಶ್ರೀ ಬೂವನಹಳ್ಳಿ ನಾಗರಾಜ್ ಇವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯಲ್ಲಿ ಶಾಖಾಧಿಕಾರಿ ಹುದ್ದೆಯಲ್ಲಿ ವಿಲೀನಗೊಂಡು, ಮೇಲೆ ಓದಲಾದ ಕ್ರಮಸಂಖ್ಯೆ (1)ರ ಆದೇಶದಲ್ಲಿ ಅಧೀನ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿಯನ್ನು ಹೊಂದಿರುತ್ತಾರೆ. ನಂತರ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕಲ್ಪಿಸಲಾದ ಅವಕಾಶದಂತೆ ಸದರಿಯವರಿಗೆ ಮೇಲೆ ಕ್ರಮಸಂಖ್ಯೆ (2) ರಲ್ಲಿ ಓದಲಾದ ಆದೇಶದಲ್ಲಿ ಅವರಿಗೆ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ವೃಂದಕ್ಕೆ ಮುಂಬಡ್ತಿಯನ್ನು ನೀಡಲಾಗಿತ್ತು.

ಸದರಿಯವರು ಪುನಃ ತಮಗೆ ಜಂಟಿ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ನೀಡುವಂತೆ ಕೋರಿ ಮನವಿ ಸಲ್ಲಿಸಿರುತ್ತಾರೆ. ಶ್ರೀ ಬೂವನಹಳ್ಳಿ ನಾಗರಾಜ್ ಇವರು ರೇಷ್ಮೆ ಇಲಾಖೆಯ ಸೇವೆಯಿಂದ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯಲ್ಲಿ ಖಾಯಂ ಆಗಿ ವಿಲೀನಾತಿ ಹೊಂದಿದ ನಂತರ ಪುನಃ ಅವರ ಸೇವೆಯನ್ನು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಯಲ್ಲಿ ಪರಿಗಣಿಸಿ ಮುಂಬಡ್ತಿ ನೀಡಿರುವ ಕ್ರಮದ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯವನ್ನು ಪಡೆಯಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಈ ಸಂಬಂಧ ಈ ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತದೆ.

> ". . . . ಅಧಿಕಾರಿಗಳಿಗೆ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯಲ್ಲಿನ ಅಧೀನ ಕಾರ್ಯದರ್ಶಿ ಹುದ್ದೆಯಿಂದ ಉಪ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ನೀಡುವ ಸಲುವಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಸಿ ವೃಂದದ ಸಾಮಾನ್ಯ ಸೇವೆಯಲ್ಲಿ ಪರಿಗಣಿಸಲಾಗಿದೆ. ಇದಕ್ಕಾಗಿ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು 2008 ಕ್ಕೆ ತಿದ್ದುಪಡಿ ತಂದು ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ (ಹಿರಿಯ ಶ್ರೇಣಿ) ವೃಂದದಲ್ಲಿ ಇರುವ ಒಟ್ಟು 66 ಹುದ್ದೆಗಳಲ್ಲಿ ಶೇ.25 ರಷ್ಟು ಹುದ್ದೆಗಳನ್ನು ನಿಯೋಜನೆ ಮೂಲಕ ತುಂಬಲು ಮೀಸಲಿರಿಸಿರುವ ಹುದ್ದೆಗಳ ಪೈಕಿ 2 ಹುದ್ದೆಗಳನ್ನು ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯ ಉಪ ನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ ವೃಂದದ ಅಧಿಕಾರಿಗಳಿಗೆ ಮುಂಬಡ್ತಿ ನೀಡಲು ಅನುವಾಗುವಂತೆ ತಿದ್ದುಪಡಿ ಮಾಡಲಾಗಿದೆ. ಆದರೆ ಈ ಕ್ರಮವು ಕಾನೂನು ಸಮ್ಮತವಲ್ಲ. ಅಭಿವೃದ್ಧಿ ಆಯುಕ್ತರ ಆಪ್ತ ಶಾಖೆಯಲ್ಲಿ ಖಾಯಂ ಆಗಿ ವಿಲೀನಗೊಳಿಸಿದ ಈ

ಅಧಿಕಾರಿಗಳಿಗೆ ಪುನಃ ಬೇರೊಂದು ಇಲಾಖೆ / ವೃಂದದಲ್ಲಿನ ಹುದ್ದೆಗೆ ನೇಮಕ ಮಾಡಲು ಅವಕಾಶವಿರುವುದಿಲ್ಲ. ಅಲ್ಲದೆ ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ-16(ಎ) (ii) ರನ್ವಯ ಒಂದು ಇಲಾಖೆಯ ಅಥವಾ ಸೇವೆಯ ನೌಕರರನ್ನು ಇನ್ನೊಂದು ಇಲಾಖೆಯ ಅಥವಾ ಸೇವೆಯ ಸಮಾನಾಂತರ ಹುದ್ದೆಗೆ ನೌಕರರ ಸೇವಾ ಅವಧಿಯಲ್ಲಿ ಒಂದು ಬಾರಿ ಮಾತ್ರ ವರ್ಗಾಯಿಸಿ ನೇಮಕ ಮಾಡಬಹುದಾಗಿರುತ್ತದೆ".

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮೇಲಿನ ಅಭಿಪ್ರಾಯದ ಹಿನ್ನೆಲೆಯಲ್ಲಿ ಪ್ರಕರಣವನ್ನು ಪುನರ್ ಪರಿಶೀಲಿಸಿದೆ. ಶ್ರೀ ಬೂವನಹಳ್ಳಿ ನಾಗರಾಜ್, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ಇವರ ಸೇವೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಯಿಂದ ವಾಪಸ್ಸು ಪಡೆಯಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರಿ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕರು, ಸುಗ್ರಾಯೋ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ ಹುದ್ದೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯ ಅಧೀನ ಕಾರ್ಯದರ್ಶಿ ವೃಂದದಿಂದ ಮುಂಬಡ್ತಿ ನೀಡಲು ದಿನಾಂಕ: 01.01.2012ರಿಂದ ಜಾರಿಗೆ ಬರುವಂತೆ ಪೂರ್ವಾನ್ವಯವಾಗಿ ಎನ್‌ಕೇಡರ್ ಹುದ್ದೆ ಎಂದು ಪರಿಗಣಿಸಿ ಆದೇಶಿಸಲಾಗಿದೆ.

ಈ ಹಿಂದೆ ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಆದೇಶದಲ್ಲಿ ಶ್ರೀ ಬೂವನಹಳ್ಳಿ ನಾಗರಾಜ್ ಇವರಿಗೆ ಅಧೀನ ಕಾರ್ಯದರ್ಶಿ ಹುದ್ದೆಯಿಂದ ಉಪ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ನೀಡಿರುವುದನ್ನು ಹಾಗೂ ಸದರಿಯವರು ಇದುವರೆವಿಗೂ ಉಪ ಕಾರ್ಯದರ್ಶಿ ಹುದ್ದೆಯಲ್ಲಿಯೇ ಕೆಲಸ ನಿರ್ವಹಿಸಿರುವುದನ್ನು ಪರಿಗಣಿಸಿ ಅವರ ಸೇವೆಯನ್ನು ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯ ಉಪ ಕಾರ್ಯದರ್ಶಿ ಹುದ್ದೆಯಲ್ಲಿ ಮುಂದುವರೆಸಲು ತೀರ್ಮಾನಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 467 ಪಬವ 2013, ಬೆಂಗಳೂರು, ದಿನಾಂಕ:08-05-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಬೂವನಹಳ್ಳಿ ನಾಗರಾಜ್, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ಇವರ ಸೇವೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ಇಲ್ಲಿಂದ ಹಿಂಪಡೆದು, ದಿನಾಂಕ: 22.08.2014ರ ಸರ್ಕಾರಿ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯ ಅಧೀನ ಕಾರ್ಯದರ್ಶಿ ಹುದ್ದೆಯಿಂದ ಮುಂಬಡ್ತಿ ನೀಡಲು ಎನ್‌ಕೇಡರ್ ಹುದ್ದೆಯೆಂದು ಪರಿಗಣಿಸಿರುವ ನಿರ್ದೇಶಕರು, (ಸುಗ್ರಾಯೋ) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿ ಹುದ್ದೆಯಲ್ಲಿಯೇ ಮುಂದುವರೆಸಿದೆ.

---

ಶ್ರೀ ಬೂವನಹಳ್ಳಿ ನಾಗರಾಜ್ ಇವರನ್ನು ನಿರ್ದೇಶಕರು, (ಸುಗ್ರಾಯೋ) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಈ ಹುದ್ದೆಯಲ್ಲಿಯೇ ಮುಂದುವರೆಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು.
3. ಎಲ್ಲಾ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಮಾನ್ಯ ಗ್ರಾ.ಅ. & ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ /ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
6. ಸಂಬಂಧಿಸಿದ ಅಧಿಕಾರಿಯವರಿಗೆ.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.